156ಕೆ.6 ಸಿ.72 (126)
C/RA
04/4/

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಶೀಲ್ ಜಿ ನಮೋಶಿ ಇವರ ಗಮನ ಸೆಳೆಯುವ ಸೂಚನೆಗೆ ಉತ್ತರ:-

ಗಮನ ಸೆಳೆಯುವ ಸೂಚನೆ:

1995ರ ನಂತರದಲ್ಲಿ ಸ್ಥಾಪನೆಯಾಗಿರುವ ಕನ್ನಡ ಮಾಧ್ಯಮ ಖಾಸಗಿ ಶಾಲಾ ಕಾಲೇಜುಗಳನ್ನು ವೇತನ ಅನುದಾನಕ್ಕೆ ಒಳಪಡಿಸುವ ಬಗ್ಗೆ ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಗಮನ ಸೆಳೆಯುವುದು..

ಉತ್ತರ:-

ಸರ್ಕಾರದ ಆದೇಶ ಸಂಖ್ಯೆ: ಇಡಿ 59 ಪಿಎಂಸಿ 2006, ದಿನಾಂಕ: 06.10.2007ರಲ್ಲಿ ದಿನಾಂಕ: 01.06.1987 ರಿಂದ 1992-93ನೇ ಶೈಕ್ಷಣಿಕ ಸಾಲಿನ ಅವಧಿಯಲ್ಲಿ ಪ್ರಾರಂಭಿಸಿ ಯಾವುದೇ ವಿಚ್ಛಿನ್ನತೆ ಇಲ್ಲದೇ ನಡೆಸಲಾಗುತ್ತಿರುವ ಖಾಸಗಿ ಪ್ರಾಥಮಿಕ / ಪ್ರೌಢ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳನ್ನು ಸಹಾಯಾನುದಾನಕ್ಕೆ ಒಳಪಡಿಸಲು ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಅವಕಾಶ ಕಲ್ಪಿಸಲಾಗಿದೆ.

ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ: ಇಡಿ 217 ಪಿಎಂಸಿ 2008, ದಿನಾಂಕ: 08.09.2008ರಲ್ಲಿ 1993-94 ಮತ್ತು 1994-95ನೇ ಶೈಕ್ಷಣಿಕ ಸಾಲುಗಳ ಅವಧಿಯಲ್ಲಿ ಪ್ರಾರಂಭಿಸಿ ಯಾವುದೇ ವಿಚ್ಛಿನ್ನತೆ ಇಲ್ಲದೇ ನಡೆಸಲಾಗುತ್ತಿರುವ ಖಾಸಗಿ ಪ್ರಾಥಮಿಕ / ಪ್ರೌಢ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳನ್ನು ಸಹಾಯಾನುದಾನಕ್ಕೆ ಒಳಪಡಿಸಲು ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಅವಕಾಶ ಕಲ್ಪಿಸಲಾಗಿದೆ.

ಮೇಲ್ಕಂಡ ಆದೇಶಗಳಲ್ಲಿ ಕಲ್ಪಿಸಿರುವ ಆದೇಶದಂತೆ 1994-95ನೇ ಶೈಕ್ಷಣಿಕ ಸಾಲಿನವರೆಗೆ ಪ್ರಾರಂಭಿಸಿ ಯಾವುದೇ ವಿಚ್ಛಿನ್ನತೆ ಇಲ್ಲದೆ ನಡೆಸಲಾಗುತ್ತಿರುವ ಅರ್ಹ ಖಾಸಗಿ ಶಾಲೆ – ಕಾಲೇಜುಗಳನ್ನು ನಿಯಮಾನುಸಾರ ವೇತನಾನುದಾನಕ್ಕೆ ಒಳಪಡಿಸಲಾಗಿರುತ್ತದೆ.

1995ನೇ ಶೈಕ್ಷಣಿಕ ಸಾಲಿನ ನಂತರದಲ್ಲಿ ಸ್ಥಾಪನೆಯಾಗಿರುವ ಕನ್ನಡ ಮಾಧ್ಯಮ ಖಾಸಗಿ ಶಾಲಾ ಕಾಲೇಜುಗಳನ್ನು ವೇತನ ಅನುದಾನಕ್ಕೆ ಒಳಪಡಿಸುವ ಬಗ್ಗೆ ಸರ್ಕಾರದ ಮುಂದೆ ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಇಪಿ 295 ಪಿಜಿಸಿ 2025

(ಎಸ್.ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು